(113)

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಹಾವೇರಿ ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪರಿಷ್ಕೃತ-1)ಗೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:- 1) ಸರ್ಕಾರದ ಆದೇಶ ಸಂಖ್ಯೆ:ನಅಇ/124/ಬೆಮಪ್ರಾ/2007, ದಿನಾಂಕ: 15-06-2007.

2) ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ಹಾವೇರಿ, ಇವರ ಪತ್ರ ಸಂಖ್ಯೆ: ಹಾನಪ್ರಾ/ ಮಯೋ(ಪ-1)ಅಂ/2015-16/131, ದಿನಾಂಕ:09-12-2015.

3) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ರವರ ಏಕ ಕಡತ ಸಂಖ್ಯೆ: ನಗ್ರಾಯೋ(10)/ಹಾವೇರಿ/ಮಯೋ(ಪ-1)/ಅಂತಿಮ/ 2015-16

*****

**ಪ್ರಸ್ತಾವನೆ:**

ಮೇಲೆ ಕ್ರ. ಸಂ. (1)ರಲ್ಲಿ ಓದಲಾದ ಆದೇಶದಲ್ಲಿ ಹಾವೇರಿ ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪ-1)ಕ್ಕೆ ದಿನಾಂಕ:15-06-2007 ರಂದು ತಾತ್ಕಾಲಿಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರ. ಸಂ. (2)ರ ಪತ್ರದಲ್ಲಿ ಹಾವೇರಿ ನಗರಾಭಿವೃದ್ಧಿ ಪ್ರಾಧಿಕಾರವು ಹಾವೇರಿ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(1) ರನ್ವಯ ಪರಿಶೀಲಿಸಿ, ಅಗತ್ಯ ಕ್ರಮ ಜರುಗಿಸಿ ಮಹಾಯೋಜನೆ (ಪರಿಷ್ಕೃತ-1) 2031 ಅನ್ನು ರೂಪಿಸಿ ಇದೇ ಕಾಯ್ದೆಯ ಕಲಂ 13(3)ರಡಿ ಸರ್ಕಾರದ ಅಂತಿಮ ಅನುಮೋದನೆ ಕೋರಿ ಪ್ರಸ್ತಾವನೆ ಸಲ್ಲಿಸಿದೆ.

ಮೇಲೆ ಓದಲಾದ ಕ್ರ. ಸಂ. (3)ರ ಏಕ ಕಡತದಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು, ಬೆಂಗಳೂರು ರವರು ಹಾವೇರಿ ಪಟ್ಟಣದ ಜನಸಂಖ್ಯೆಯು 2031ನೇ ಸಾಲಿಗೆ 1,25,000 ಗಳಿಗೆ ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾಯೋಜನೆ (ಪರಿಷ್ಕೃತ-1) 2031 ನ್ನು ರೂಪಿಸಲಾಗಿದೆ. ಹಾವೇರಿ ಪಟ್ಟಣದ ಜನಸಂಖ್ಯೆ, ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ, ಹಾಲಿ ಬೆಳವಣಿಗೆಯ ಗತಿ, ಹವಾಗುಣ, ರಸ್ತೆಗಳ ಹಾಲಿ ಪರಿಚಲನೆ ವ್ಯವಸ್ಥೆಯ ಸಮಸ್ಯೆಗಳನ್ನು ವಿಶ್ಲೇಷಿಸಿ ಯೋಜನಾ ತತ್ವಗಳಿಗನುಗುಣವಾಗಿ ಹಾಗೂ ಮಹಾಯೋಜನೆಯ ತಯಾರಿಕೆ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ (12) ರಲ್ಲಿ ನಿಗಧಿಪಡಿಸಿರುವ ಅಂಶಗಳನ್ನು ಪರಿಗಣಿಸಿ, ನಗರದ ಯೋಜಿತ ಬೆಳವಣಿಗೆಗಾಗಿ ಪ್ರಸ್ತಾಪಿಸಿರುವ ಒಟ್ಟು 2036.46 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 1119.64 ಹೆಕ್ಟೇರ್ (ಶೇ.54.98), ವಾಣಿಜ್ಯಕ್ಕಾಗಿ 116.90 ಹೆಕ್ಟೇರ್ (ಶೇ.5.74), ಕೈಗಾರಿಕೆಗಾಗಿ 102.55 ಹೆಕ್ಟೇರ್ (ಶೇ.5.04), ಸಾರ್ವಜನಿಕ/ಅರೆ ಸಾರ್ವಜನಿಕಕ್ಕೆ 121.72 ಹೆಕ್ಟೇರ್ (ಶೇ.5.98), ಉದ್ಯಾನವನ ಮತ್ತು ಬಯಲು ಜಾಗಗಳಿಗೆ 170.23 ಹೆಕ್ಟೇರ್ (ಶೇ.8.36), ಸಾರ್ವಜನಿಕ ಉಪಯುಕ್ತತೆಗಾಗಿ 12.20 ಹೆಕ್ಟೇರ್ (ಶೇ.0.60) ಹಾಗೂ ಸಾರಿಗೆ ಮತ್ತು ಸಂಪರ್ಕ ವಲಯಕ್ಕೆ 393.22

ಹೆಕ್ಟೇರ್ (ಶೇ.19.30) ಪ್ರದೇಶವನ್ನು ನಿಗಧಿಪಡಿಸಲಾಗಿದೆ. ಮಹಾ ಯೋಜನೆ (ಪರಿಷ್ಕೃತ-1)ನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದೆ. ಸದರಿ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 69 ಬೆಮಪ್ರಾ 2016, ದಿನಾಂಕ: 31.03.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹಾವೇರಿ ನಗರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾಯೋಜನೆ (ಪರಿಷ್ಕೃತ-1) 2031 ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರನ್ವಯ ಅಂತಿಮ ಅನುಮೋದನೆ ನೀಡಿದೆ.

ಮಹಾಯೋಜನೆ (ಪರಿಷ್ಕೃತ-1)ಕ್ಕೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.

ಗೆ:

ಸಂಕಲನಾಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ರವರು 200 ಪ್ರತಿಗಳನ್ನು ವಿಶೇಷ ರಾಜ್ಯ ಪತ್ರದಲ್ಲಿ ಮುದ್ರಿಸಿ, 100 ಪ್ರತಿಗಳನ್ನು ಅಧೀನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ರವರಿಗೆ ಕಳುಹಿಸುವಂತೆ ಕೋರಲಾಗಿದೆ.

ಪ್ರತಿಯನ್ನು:

1) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
2) ಜಿಲ್ಲಾಧಿಕಾರಿಗಳು ಹಾವೇರಿ ಜಿಲ್ಲೆ, ಹಾವೇರಿ.
3) ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ಹಾವೇರಿ ರವರಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.
4) ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.
5) ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ. ಹಾವೇರಿ.
6) ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.